# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತಿ.ನರಸೀಪುರ

## ಸಿ.ಸಿ.621/2023

| | | | | |
|---|---|---|---|---|
| 01 | ಹೆಸರು | ಪುಷ್ಪ ಪಿ | ಸಿ ಡಬ್ಲೂ | **1** |
| 02 | ಗಂಡ ಹೆಸರು | ನಾಗೇಶ | ಪಿಡಬ್ಲೂ | 1 |
| 03 | ವಯಸ್ಸು | 42 | ಪ್ರಮಾಣೀಕರಿಸಲಾದ ದಿನಾಂಕಃ | |
| 04 | ಉದ್ಯೋಗ | ಗೃಹಿಣಿ | 13.10.2025 | |
| 05 | ಊರು | ಅರಕೆರೆ ಗ್ರಾಮ | | |

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಮೃತ ನಾಗೇಶ ನನ್ನ ಗಂಡ ಇರುತ್ತಾರೆ. ಚಾ ಸಾ 2 ರವರು ನಮ್ಮ ಊರಿನವರು ಇರುತ್ತಾರೆ. ಆರೋಪಿ ನನ್ನ ತಮ್ಮ ಇರುತ್ತಾರೆ. ನನಗೆ ಚಾ ಸಾ 3 ರಿಂದ 11 ರವರ ಪರಿಚಯ ಇರುತ್ತದೆ. ಈಗ ನೋಡುತ್ತಿರುವ ದಾಖಲೆಯಲ್ಲಿರುವ ಸಹಿ ನನ್ನದೆ. ಸಾಕ್ಷಿಯು ದೂರನ್ನು ನೋಡಿ ಗುರುತಿಸಿದ್ದು ಅದನ್ನು ನಿ ಪಿ 1 ಎಂದು ಗುರುತಿಸಲಾಯಿತು ಮತ್ತು ಸಾಕ್ಷಿಯ ಸಹಿಯನ್ನು ನಿ ಪಿ 1(ಎ)ಎಂದು ಗುರುತಿಸಲಾಯಿತು. ನನಗೆ ನಿ ಪಿ 1 ರಲ್ಲಿ ಬರೆದಿರುವ ಸಂಗತಿಗಳು ಗೊತ್ತಿಲ್ಲ. ನಾನು ಆರೋಪಿಯ ವಿರುದ್ಧ ಯಾವುದೇ ದೂರು ಕೊಟ್ಟಿರುವುದಿಲ್ಲ. ಸದರಿ ಅಪಘಾತದ ಬಗ್ಗೆ ನನಗೆ ಮಾಹಿತಿ ಇಲ್ಲ.ಯಾರ ತಪ್ಪಿನಿಂದ ಅಪಘಾತ ಆಗಿರುತ್ತದೆ ಎಂದು ನನಗೆ ಗೊತ್ತಿಲ್ಲ. ಅಪಘಾತಕ್ಕೊಳಗಾದ ವಾಹನವನ್ನು ನೋಡಿದರೆ ಗುರುತಿಸಲು ಸಾಧ್ಯವಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಬೇರೆ ಮಾಹಿತಿ ಇರುವುದಿಲ್ಲ.

**(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಮಾನ್ಯ ಎ ಪಿ ಪಿ ರವರು ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:**

ದಿಃ13.05.2023 ರಂದು ಮಧ್ಯಾಹ್ನ 2.00 ಗಂಟೆ ಸಮಯದಲ್ಲಿ ಆರೋಪಿತನು ತನ್ನ ಹೋಂಡಾ ಆಕ್ಟೀವಾ ನೋಂದಣಿ ಸಂ.ಕೆ ಎ 11 ಇ ಯು 8000 ರ ಹಿಂಭಾಗದಲ್ಲಿ ನನ್ನ ಗಂಡನನ್ನು ಕೂರಿಸಿಕೊಂಡು ಅತೀವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿ ರಸ್ತೆ ದಿಬ್ಬಗಳನ್ನು ದೂರದಿಂದ ಗುರುತಿಸದೇ ಸ್ಕೂಟರ್ ವೇಗವನ್ನು ನಿಯಂತ್ರಿಸಲಾಗದೇ ಕೆಳಕ್ಕೆ ಬೀಳಿಸಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಸದರಿ ಅಪಘಾತದಲ್ಲಿ ನನ್ನ ಗಂಡನ ಮೂಗಿಗೆ ಬಲಕಣ್ಣಿನ ಕೆಳಭಾಗಕ್ಕೆ, ಬಲಭುಜಕ್ಕೆ,

ಎದೆಯ ಬಲ ಭಾಗಕ್ಕೆ, ಬಲ ಕೈಗೆ, ಎಡಮೊಣಕೈಗೆ ಮತ್ತು ತಲೆಗೆ ಗಾಯಗಳಾಗಿದ್ದು ನಂತರ ಮಂಡ್ಯದ ಮಿಮ್ಸ್ ಆಸ್ಪತ್ರೆಗೆ ದಾಖಲಾಗಿದ್ದು ಮತ್ತು ಮೈಸೂರಿನ ಡಿ ಆರ್ ಎಂ ಆಸ್ಪತ್ರೆಗೆ ದಾಖಲಾಗಿದ್ದು ಮತ್ತು ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಾಗಿದ್ದು ಆದರೆ ಚಿಕಿತ್ಸೆ ಫಲಕಾರಿಯಾಗದೇ ಮೃತಪಟ್ಟಿರುತ್ತಾರೆ ಎಂದರೆ ಸರಿ. ಅದರಂತೆ ನಾನು ಆರೋಪಿತನ ವಿರುದ್ಧ ನಿ ಪಿ 1ರಂತೆ ದೂರು ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ನಾನು ನಿ ಪಿ 1ರಂತೆ ಪೊಲೀಸರಿಗೆ ದೂರು ಕೊಟ್ಟಿದ್ದರೂ ಸಹ ಆರೋಪಿ ನನ್ನ ತಮ್ಮನಾದ ಕಾರಣ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ವಕೀಲರಿಂದಃಇಲ್ಲ ಎಂದು ನುಡಿದಿರುತ್ತಾರೆ.**

ಮರುವಿಚಾರಣೆಃಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿಯಾಗಿದೆ.

(ಸಚಿನ್ ಹೆಚ್ . ಆರ್.)
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ತಿ.ನರಸೀಪುರ.